**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.1251/2021**

ಪಿ.ಡಬ್ಲ್ಯೂಃ **7**

ಸಿ.ಡಬ್ಲ್ಯೂಃ 12

| | |
|---|---|
| ಹೆಸರು | ಃ ರಘುನಾಥ್ ಎಸ್ ವಿ |
| ತಂದೆಯ ಹೆಸರು | ಃ ವೀರಭದ್ರಪ್ಪ |
| ವಯಸ್ಸು | ಃ 35 ವರ್ಷ |
| ಉದ್ಯೋಗ | ಃ ಪಿ ಎಸ್ ಐ |
| ವಾಸಸ್ಥಳ | ಃ ಚಿಕ್ಕಮಗಳೂರು |

**ದಿನಾಂಕಃ 09-06-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

ಆರೋಪಿಯು ಈ ದಿನ ನ್ಯಾಯಾಲಯದಲ್ಲಿ ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಆರೋಪಿಯ ಗುರುತಿಸುವಿಕೆ ಬಗ್ಗೆ ತಕರಾರು ಇಲ್ಲ ಎಂದು ತಿಳಿಸಿರುತ್ತಾರೆ.

**ಮುಖ್ಯ ವಿಚಾರಣೆ ಃ ಸ.ಸ.ಅ. ರವರಿಂದ.**

ನಾನು ದಿಃ **15-11-2019** ರಿಂದ **23-07-2021** ರವರೆಗೆ ಲಕ್ಕವಳ್ಳಿ **ಪೋಲೀಸ್ ಠಾಣೆಯಲ್ಲಿ** ಪಿ ಎಸ್ ಐ **ಆಗಿ ಕರ್ತವ್ಯ** ನಿರ್ವಹಿಸಿರುತ್ತೇನೆ.

ದಿನಾಂಕಃ 03-07-2020 ರಂದು ಚಾಸಾ-15 ರವರಿಂದ ಪ್ರಕರಣದ ಕಡತವನ್ನು ಪಡೆದುಕೊಂಡು ತನಿಖೆ ಮುಂದುವರಿಸಿದ್ದು, ಅದೇ ದಿನ ಚಾಸಾ-1 ರವರು ತೋರಿಸಿದ ಕೃತ್ಯ ನಡೆದ ಸ್ಥಳದ ಮಹಜರನ್ನು ಚಾಸಾ-2 ಮತ್ತು 3 ರವರ ಸಮಕ್ಷಮ ಬೆಳಿಗ್ಗೆ 9-00 ರಿಂದ 10-00 ಗಂಟೆಯವರೆಗೆ ಮಾಡಿರುತ್ತೇನೆ. ಅಲ್ಲಿಯೇ ಛಾಯಚಿತ್ರವನ್ನು ತೆಗೆಸಿರುತ್ತೇನೆ. ಚಾಸಾ-13 ರವರು ಮಹಜರ್‌ನ್ನು ಬರೆದಿರುತ್ತಾರೆ. ನಂತರ ದಿಃ 16-03-2021 ರಂದು ಚಾಸಾ-9 ರವರ ಜೊತೆ ರಂಗೇನಹಳ್ಳಿಯಲ್ಲಿ ಆರೋಪಿಯನ್ನು ವಶಕ್ಕೆ ಪಡೆದುಕೊಂಡು 6-00 ಗಂಟೆಗೆ ಚಾಸಾ-17 ರವರ ಮುಂದೆ ಹಾಜರುಪಡಿಸಿ ವರದಿಯನ್ನು ನೀಡಿರುತ್ತೇನೆ. ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-17 ರವರಿಗೆ ನೀಡಿರುತ್ತೇನೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಡಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಎರಡು ಛಾಯಚಿತ್ರಗಳನ್ನು ತೋರಿಸಲಾಗಿದ್ದು, ಅವುಗಳನ್ನು ನಿಪಿ-7 ಮತ್ತು 8 ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-7 ಮತ್ತು 8 ರಲ್ಲಿ ತಮ್ಮ ಇರುವಿಕೆಯನ್ನು ಗುರುತಿಸಿರುತ್ತಾರೆ.

**<u>ಪಾಟೀ ಸವಾಲು : ಆರೋಪಿತರ ಪರ</u>** <u>ಶ್ರೀಮತಿ ಬಿ ಟಿ ಜಿ</u> **<u>ವಕೀಲರಿಂದ.</u>**

ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಪಂಚರನ್ನು ಕರೆದುಕೊಂಡು ಮಹಜರ್ ಕ್ರಮ ಜರುಗಿಸಿರುತೆತೇನೆಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದಿರಾ ಎಂದರೆ ಸರಿಯಲ್ಲ. ನಿಪಿ-7 ಮತ್ತು 8 ಛಾಯಚಿತ್ರಗಳನ್ನು ಈ ಪ್ರಕರಣಕ್ಕಾಗಿ ಸೃಷ್ಠಿ ಮಾಡಿರುತ್ತಿರಾ ಎಂದರೆ ಸರಿಯಲ್ಲ. ನಿಪಿ-2 ಮಹಜರನ್ನು ಠಾಣೆಯಲ್ಲಿ ಕುಳಿತು ಸೃಷ್ಠಿ ಮಾಡಿರುತ್ತಿರಾ ಎಂದರೆ ಸರಿಯಲ್ಲ. ಆರೋಪಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದೇ ಇದ್ದರೂ ಚಾಸಾ-1 ರವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದಿರಾ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
**ಪ್ರ.ದ.ನ್ಯಾ.ದಂ. ರವರು, ತರೀಕೆರೆ.**